**Bangalore**
**Regional News**
**15.03.2026 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

<u>ಮುಖ್ಯಾಂಶಗಳು</u>

1. ರಾಜ್ಯದ ಅನಿಲ ಅಭಾವ ಪರಿಸ್ಥಿತಿ ನಿಭಾಯಿಸಲು ಸರ್ಕಾರದಿಂದ ಗಂಭೀರ ಕ್ರಮ - ಮುಖ್ಯಮಂತ್ರಿ ಸಿದ್ದರಾಮಯ್ಯ
2. ಕಾಂಗ್ರೆಸ್ ಶಾಸಕರನ್ನು ಓಲೈಸುವ ನಿಟ್ಟಿನಲ್ಲಿ ಆಪರೇಷನ್ ಕಮಲ ಮೂಲಕ ಯತ್ನ - ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆರೋಪ
3. ವಿಶ್ವ ಗ್ರಾಹಕರ ಹಕ್ಕುಗಳ ದಿನಾಚರಣೆ ; ಜವಾಬ್ದಾರಿಯುತ ಗ್ರಾಹಕರಾಗಿ ಬಲಿಷ್ಠ ಭಾರತ ನಿರ್ಮಾಣಕ್ಕೆ ಕೈಜೋಡಿಸುವಂತೆ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಕರೆ
4. ಇಂದು ಮೇಜರ್ ಸಂದೀಪ್ ಉನ್ನಿಕೃಷ್ಣನ್ ಜನ್ಮದಿನ ; ಗಣ್ಯರಿಂದ ಗೌರವ ನಮನ

<><><><>

ಇಂದಿರಾ ಲಂಕೇಶ್ ಪ್ರಕಾಶನ ಕೊಂಡಜ್ಜಿ ಬಸಪ್ಪ ಸಭಾ ಭವನದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು "ಪಿ.ಲಂಕೇಶ್ ಅವರ ಟೀಕೆ ಟಿಪ್ಪಣಿ ೩ ಭಾಗಗಳ ಪುಸ್ತಕ ಹಾಗೂ ಲಂಕೇಶರ ಕಥೆಗಳ ಆಡಿಯೊ ಬುಕ್ ಬಿಡುಗಡೆ ಮಾಡಿದರು. ನಟ ಪ್ರಕಾಶ್ ರೈ, ಸಾಹಿತಿ ನಟರಾಜ್ ಹುಳಿಯಾರ್, ಲೇಖಕಿ-ವಿಮರ್ಶಕಿ ಎಂ.ಎಸ್.ಆಶಾದೇವಿ, ಇಂದಿರಾ ಲಂಕೇಶ್, ಕವಿತಾ ಲಂಕೇಶ್, ಟಿ.ಎನ್.ಸೀತಾರಾಂ ಸೇರಿ ಹಲವು ಗಣ್ಯರು ಉಪಸ್ಥಿತರಿದ್ದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಎದುರಾಗಿರುವ ಅನಿಲ ಅಭಾಗದ ಪರಿಸ್ಥಿತಿಯನ್ನು ಎದುರಿಸಲು ಸರ್ಕಾರ ಗಂಭೀರ ಕ್ರಮ ಕೈಗೊಳ್ಳುತ್ತಿದೆ. ಈ ಕುರಿತು ವಿಧಾನಮಂಡಲದಲ್ಲಿ ಈಗಾಗಲೇ ಉತ್ತರಿಸಲಾಗಿದ್ದು, ಕೊರತೆಯನ್ನು ನೀಗಿಸಲು ವಿದೇಶಗಳಿಂದ ಪೂರೈಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ ಎಂದರು. ವಿಶೇಷವಾಗಿ ಹೋಟೆಲ್ ಉದ್ಯಮದ ಮೇಲೆ ಅವಲಂಬಿತರಾಗಿರುವವರ ಜೀವನನೋಪಾಯಕ್ಕೆ ತೊಂದರೆ ಯಾಗದಂತೆ ನೋಡಿಕೊಳ್ಳುವುದು ಸರ್ಕಾರದ ಆದ್ಯತೆಯಾಗಿದೆ. ಕೇಂದ್ರ ನೈಸರ್ಗಿಕ ಅನಿಲ ಸಚಿವರು ಸಮಸ್ಯೆ ಸರಿಪಡಿಸುವ ಭರವಸೆ ನೀಡಿರುವುದಾಗಿ ಮುಖ್ಯಮಂತ್ರಿ ತಿಳಿಸಿದ್ದಾರೆ.

<><><><>

ಕಾಂಗ್ರೆಸ್ ಶಾಸಕರನ್ನು ಓಲೈಸುವ ನಿಟ್ಟಿನಲ್ಲಿ ಆಪರೇಷನ್ ಕಮಲ ಮೂಲಕ ಶಾಸಕರಿಗೆ ದೊಡ್ಡ ಮಟ್ಟದ ಆಮೀಷ ಒಡ್ಡಲಾಗುತ್ತಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬಿಜೆಪಿ ವಿರುದ್ಧ ಗಂಭೀರ ಆರೋಪ ಮಾಡಿದ್ದಾರೆ. ಬೆಂಗಳೂರಿನ ಕೆಪಿಸಿಸಿ ಕಚೇರಿಯ ಬಳಿ ಇಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ತಮ್ಮ ಪಕ್ಷದ ಶಾಸಕರೊಬ್ಬರನ್ನು ಒಡಿಶಾದಿಂದ ಬಂದ ತಂಡವೊಂದು ಸಂಪರ್ಕಿಸಿ ಓಲೈಕೆ ಯತ್ನ ಮಾಡಿದೆ. ಆಮೀಷಕ್ಕೆ ಒಳಗಾಗದ ಶಾಸಕರು ತಕ್ಷಣವೇ ಈ ವಿಷಯವನ್ನು ಪಕ್ಷದ ಮುಖಂಡರಿಗೆ ತಿಳಿಸಿರುವುದಾಗಿ ಮಾಹಿತಿ ನೀಡಿದ್ದಾರೆ.

ಈ ಸಂಬಂಧ ಪೊಲೀಸ್ ದೂರು ದಾಖಲಿಸಿದ್ದು, ಈಗಾಗಲೇ ಇಬ್ಬರನ್ನು ವಶಕ್ಕೆ ಪಡೆದು, ಇನ್ನಿಬ್ಬರಿಗಾಗಿ ಶೋಧಕಾರ್ಯ ನಡೆಯುತ್ತಿದೆ ಎಂದರು. ಮುಂಬರುವ ಉಪಚುನಾವಣೆಗಳಿಗೆ ಕಾಂಗ್ರೆಸ್ ಪಕ್ಷ ಸಂಪೂರ್ಣವಾಗಿ ಸಿದ್ಧವಾಗಿದೆ ಎಂದು ಇದೇ ವೇಳೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.

<><><><>

ಗೃಹ ಬಳಕೆಯ ಅಡುಗೆ ಅನಿಲ ಸಿಲಿಂಡರ್‌ಗಳ ಉಪಯೋಗಕ್ಕೆ ಯಾವುದೆ ತೊಂದರೆ ಆಗದಂತೆ ಕ್ರಮವಹಿಸಲಾಗಿದ್ದು, ಗೃಹಬಳಕೆ ಸಿಲಿಂಡರ್ ಅನ್ನು ವಾಣಿಜ್ಯ ಉದ್ದೇಶಕ್ಕಾಗಿ ಬಳಸಿದ್ದಲ್ಲಿ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಕೆ.ಹೆಚ್. ಮುನಿಯಪ್ಪ ತಿಳಿಸಿದ್ದಾರೆ. ಈ ಕುರಿತು ಪ್ರಕಟಣೆ ನೀಡಿರುವ ಅವರು, ರಾಜ್ಯಾದ್ಯಂತ ೧೪.೨ ಕೆ.ಜಿ.ಯ ಗೃಹ ಬಳಕೆಯ ಒಟ್ಟು ೩ ಲಕ್ಷದ ೮೬ ಸಾವಿರದ ೩೬೩ ಸಿಲಿಂಡರ್ ಹಾಗೂ ವಾಣಿಜ್ಯ ಬಳಕೆಯ ೬ ಸಾವಿರದ ೩೭೧ ಸಿಲಿಂಡರ್ ಗಳನ್ನು ವಿತರಣೆ ಮಾಡಲಾಗಿದೆ. ಗೃಹ ಬಳಕೆ ಸಿಲಿಂಡರ್‌ಗಳನ್ನು ವಾಣಿಜ್ಯ ಉದ್ದೇಶಕ್ಕೆ ಬಳಸುತ್ತಿದ್ದ ಬೆಂಗಳೂರಿನ ಪೀಣ್ಯ, ಚಿಕ್ಕಜಾಲ, ಶಿವಮೊಗ್ಗ, ಯಾದಗಿರಿ, ದಾವಣಗರೆ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಅಗತ್ಯ ವಸ್ತುಗಳ ಕಾಯ್ದೆ ೧೯೫೫ರ ಕಾಯ್ದೆ ಅಡಿ ಪ್ರಕರಣವನ್ನು ದಾಖಲಿಸಿ ಸಿಲಿಂಡರ್ ವಶಪಡಿಸಿಕೊಳ್ಳಲಾಗಿದೆ ಹಾಗೆಯೇ ಕೋಲಾರ ಜಿಲ್ಲೆಯ ಕೆಜಿಎಫ್‌ನಲ್ಲಿ ಅಕ್ರಮ ಅನಿಲ ಮರುಪೂರಣ ನಡೆಸುತ್ತಿದ್ದ ಅನಿಲ ವಿತರಕರ ಮೇಲೆ ಪ್ರಕರಣ ದಾಖಲಿಸಲಾಗಿದೆ. ವಾಣಿಜ್ಯ ಬಳಕೆಯ ಸಿಲಿಂಡರ್ ಗಳ ಒಟ್ಟು ಶೇಕಡ ೨೦ರಷ್ಟು ಸಿಲಿಂಡರ್ ಗಳನ್ನು ಕೇಂದ್ರ ಸರ್ಕಾರದ ಮಾರ್ಗಸೂಚನೆಗಳಂತೆ ಆಸ್ಪತ್ರೆ, ಶಾಲಾ, ಶಿಕ್ಷಣ ಸಂಸ್ಥೆಗಳು, ವಿಮಾನ ನಿಲ್ದಾಣ, ರೈಲು ನಿಲ್ದಾಣ, ಬಸ್ ನಿಲ್ದಾಣಗಳ ಕ್ಯಾಂಟಿನ್ ಗಳಿಗೆ ಆದ್ಯತೆ ಮೇರೆಗೆ ವಾಣಿಜ್ಯ ಬಳಕೆಯ ಸಿಲಿಂಡರ್ ಗಳನ್ನು ವಿತರಿಸಲು ಸೂಚಿಸಲಾಗಿದೆ ಎಂದು ಸಚಿವ ಮುನಿಯಪ್ಪ ತಿಳಿಸಿದ್ದಾರೆ.

<><><><>

“ಸುರಕ್ಷಿತ ಉತ್ಪನ್ನಗಳು; ಆತ್ಮವಿಶ್ವಾಸಭರಿತ ಗ್ರಾಹಕರು”, ಧ್ಯೇಯದೊಂದಿಗೆ ಇಂದು, ವಿಶ್ವ ಗ್ರಾಹಕ ಹಕ್ಕುಗಳ ದಿನವನ್ನು ಆಚರಿಸಲಾಗುತ್ತಿದೆ. ಗ್ರಾಹಕರ ಹಕ್ಕುಗಳು ಮತ್ತು ಅಗತ್ಯತೆಗಳ ಕುರಿತು, ಜಾಗತಿಕವಾಗಿ ಜಾಗೃತಿ ಮೂಡಿಸುವ, ದಿನ ಇದಾಗಿದೆ. ಗ್ರಾಹಕರ ಹಕ್ಕುಗಳನ್ನು ಗೌರವಿಸಬೇಕು ಮತ್ತು ರಕ್ಷಿಸಬೇಕು. ಗ್ರಾಹಕರ ಹಕ್ಕುಗಳನ್ನು ದುರ್ಬಲಗೊಳಿಸುವ, ಮಾರುಕಟ್ಟೆಯ ದುರುಪಯೋಗ ಮತ್ತು ಸಾಮಾಜಿಕ ಅನ್ಯಾಯಗಳ ವಿರುದ್ಧ ಪ್ರತಿಭಟಿಸಲು ವಿಶ್ವ ಸಂಸ್ಥೆ ಮೀಸಲಿರಿಸಿದ ದಿನವಾಗಿದೆ. ವಿಶ್ವ ಗ್ರಾಹಕರ ಹಕ್ಕುಗಳ ದಿನದ ಅಂಗವಾಗಿ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ನಾಡಿನ ಸಮಸ್ತ ಜನತೆಗೆ ಶುಭ ಕೋರಿದ್ದು, ಗ್ರಾಹಕರ ಹಕ್ಕುಗಳ ರಕ್ಷಣೆ ಮತ್ತು ಜಾಗೃತಿಯು ರಾಷ್ಟ್ರದ ಆರ್ಥಿಕ ಸದೃಢತೆಗೆ ಅತ್ಯಂತ ಅವಶ್ಯಕವಾಗಿದೆ ಎಂದಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅವರು, ಗ್ರಾಹಕರಿಗೆ ಅವರ ಹಕ್ಕುಗಳು ಮತ್ತೆ ಜಾವಬ್ದಾರಿಗಳ ಬಗ್ಗೆ ಎಲ್ಲರಲ್ಲಿ ಜಾಗೃತಿ ಮೂಡಿಸುವ ಜೊತೆಗೆ ಬಲಿಷ್ಠ ಭಾರತ ನಿರ್ಮಾಣಕ್ಕೆ ಕೈಜೋಡಿಸುವಂತೆ ಕರೆ ನೀಡಿದ್ದಾರೆ.

<><><><>

ರಾಜ್ಯದ ಹಲವು ಜಿಲ್ಲೆಗಳಲ್ಲಿ ನಿನ್ನೆ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿತ್ತು. ಈ ವೇಳೆ ಸಾವಿರಾರು ವ್ಯಾಜ್ಯಗಳನ್ನು ಯಶಸ್ವಿಯಾಗಿ ಇತ್ಯರ್ಥಪಡಿಸಲಾಗಿದೆ. ಕೋಲಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ನಿನ್ನೆ ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಲಾಗಿದ್ದ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಒಟ್ಟು ೫೬ ಸಾವಿರದ ೨೩೫ ಪ್ರಕರಣಗಳನ್ನು ಪರಸ್ಪರ ರಾಜೀ ಸಂಧಾನದ ಮೂಲಕ ಯಶಸ್ವಿಯಾಗಿ ಇತ್ಯರ್ಥಪಡಿಸಲಾಗಿದೆ ಎಂದು ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ಪ್ರಧಾನ ನ್ಯಾಯಾಧೀಶರಾದ ಬಿ.ಎಸ್.ಜಯಶ್ರೀ ತಿಳಿಸಿದ್ದಾರೆ. ಪ್ರಕರಣಗಳನ್ನು ರಾಜೀ ಮೂಲಕ ತಾರ್ಕಿಕ ಹಂತಕ್ಕೆ ಕೊಂಡ್ಯೊಯ್ದು ಸರ್ವ ಸಮ್ಮತವಾದ ನ್ಯಾಯವನ್ನು ಲೋಕ ಅದಾಲತ್‌ನಲ್ಲಿ ಒದಗಿಸಲಾಗುವುದು ಎಂದು ತಿಳಿಸಿದರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ನಟೇಶ ಆರ್. ಮಾತನಾಡಿ, ಈ ಬಾರಿಯ ಲೋಕ್ ಅದಾಲತ್‌ನಲ್ಲಿ ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಿ ಒಟ್ಟು ಮೂವತ್ತೇಳು ಕೋಟಿ ಎಪ್ಪತ್ತೈದು ಲಕ್ಷದ ಎಂಬತ್ತೂ ಸಾವಿರದ ಐದು ನೂರಆರು ರೂಪಾಯಿ ಪರಿಹಾರ ಮೊತ್ತವನ್ನು ಪಾವತಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ. ದಾವಣಗೆರೆ ಜಿಲ್ಲೆಯ ೨೨ ನ್ಯಾಯಾಲಯಗಳಲ್ಲಿ ನಡೆದ ಲೋಕ ಅದಾಲತ್‌ನಲ್ಲಿ ಒಟ್ಟು ೬ ಸಾವಿರದ ೮೧೮ ಪ್ರಕರಣಗಳು ರಾಜಿ ಮೂಲಕ ಇತ್ಯರ್ಥಗೊಂಡು ಇದರೊಂದಿಗೆ ೧.೬೨ ಲಕ್ಷ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಕೂಡ ಬಗೆಹರಿಸಲಾಗಿದೆ ಎಂದು ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಡಿ.ಕೆ.ವೇಲಾ ತಿಳಿಸಿದ್ದಾರೆ. ವಿವಿಧ ವ್ಯಾಜ್ಯಗಳಿಂದ ಒಟ್ಟು ೧೩ ಕೋಟಿ ರೂಪಾಯಿ ಹಣ ವಸೂಲಾತಿಯಾಗಿದೆ ಎಂದರು. ಬಳ್ಳಾರಿ ಜಿಲ್ಲೆಯಲ್ಲಿ ನಿನ್ನೆ ನಡೆದ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ೧೧ ಸಾವಿರದ ೪೦೬ ವಿವಿಧ ಬಗೆಯ ಪ್ರಕರಣಗಳನ್ನು ರಾಜಿ

ಸಂಧಾನದ ಮೂಲಕ ಇತ್ಯರ್ಥ ಪಡಿಸುವ ಜೊತೆಗೆ ೩೭.೮೯ ಕೋಟಿ ರೂಪಾಯಿ ಪರಿಹಾರದ ಮೊತ್ತ ಕೊಡಿಸಲಾಗಿದೆ. ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆ ಒಳಗೊಂಡು ಒಟ್ಟು ೩೧ ನ್ಯಾಯಾಲಯಗಳಲ್ಲಿ ಲೋಕ್ ಅದಾಲತ್ ಹಮ್ಮಿಕೊಳ್ಳಲಾಗಿತ್ತು. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷೆ ಕೆ.ಜಿ.ಶಾಂತಿ ಪ್ರಕರಣಗಳ ವಿಲೇವಾರಿ ಮಾಡಿದರು.

<><><>

ಇಂದು ವೀರಯೋಧ, ಮೇಜರ್ ಸಂದೀಪ್ ಉನ್ನಿಕೃಷ್ಣನ್ ಅವರ ಜನ್ಮದಿನ. ಈ ಹಿನ್ನೆಲೆಯಲ್ಲಿ ಕೇಂದ್ರ ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಹಲವು ಗಣ್ಯರು ಮೇಜರ್ ಸಂದೀಪ್ ಉನ್ನಿಕೃಷ್ಣನ್ ಅವರಿಗೆ ಗೌರವ ನಮನ ಸಲ್ಲಿಸಿದ್ದಾರೆ. ತಮ್ಮ ಸಂದೇಶದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮುಂಬೈ ಭಯೋತ್ಪಾದನಾ ದಾಳಿಯ ಸಂದರ್ಭದಲ್ಲಿ ಎನ್‌ಎಸ್‌ಜಿ ಕಮಾಂಡೋ ಆಗಿ ಮುಂಚೂಣಿಯಲ್ಲಿ ನಿಂತು ಹೋರಾಡಿದ ಅವರು, ನೂರಾರು ಅಮಾಯಕರ ಪ್ರಾಣ ರಕ್ಷಿಸಿದ್ದರು ಎಂದು ಸ್ಮರಿಸಿದ್ದಾರೆ. ಮುಂಬೈ ಉಗ್ರರ ದಾಳಿ ಸಂದರ್ಭ ಎದೆಗುಂದದೆ ಹೋರಾಡಿ, ಹುತಾತ್ಮರಾದ ಅಶೋಕ ಚಕ್ರ ಪುರಸ್ಕೃತ ಮೇಜರ್ ಉನ್ನಿಕೃಷ್ಣನ್ ಅವರ ಧೈರ್ಯ, ಶೌರ್ಯ, ಸಾಹಸ ಹಾಗೂ ತ್ಯಾಗವು ಸದಾ ಸ್ಮರಣೀಯ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ಸಾಮಾಜಿಕ ಜಾಲತಾಣದ ಮೂಲಕ ಸ್ಮರಿಸಿದ್ದಾರೆ.

<><><>

ಚಿಕ್ಕಮಗಳೂರು ಜಿಲ್ಲೆಯ ಭದ್ರಾ ಅಭಯಾರಣ್ಯದ ಮೊತ್ತೋಡಿ ಅರಣ್ಯ ವ್ಯಾಪ್ತಿಯಲ್ಲಿ ಉಂಟಾಗಿದ್ದ ಕಾಡ್ಗಿಚ್ಚನ್ನು ಸಂಪೂರ್ಣ ಹತ್ತೋಟಿಗೆ ತರಲಾಗಿದೆ ಈ ಅವಘಡದಲ್ಲಿ ಅಭಯಾರಣ್ಯಕ್ಕೆ ಹಾಗೂ ವನ್ಯ ಜೀವಿಗಳಿಗೆ ಹೆಚ್ಚಿನ ಹಾನಿಯುಂಟಾಗಿಲ್ಲ ಎಂದು ಭದ್ರಾ ವನ್ಯಜೀವಿ ವಿಭಾಗದ ಉಪ ವಲಯ ಅರಣ್ಯಾಅಧಿಕಾರಿ ಪುಲ್ಕಿತ್ ಮೀನಾ ತಿಳಿಸಿದ್ದಾರೆ.

<><><>

ಬೆಂಗಳೂರು ನಗರದ ಪ್ರಮುಖ ಕೆರೆಗಳಲ್ಲಿ ಒಂದಾದ ಹಲಸೂರು ಕೆರೆಯ ಸಮಗ್ರ ಅಭಿವೃದ್ಧಿ ಕಾಮಗಾರಿಗಳು ಪ್ರಸ್ತುತ ಪ್ರಗತಿಯಲ್ಲಿದ್ದು, ಕೆರೆಯ ಪರಿಸರ ಹಾಗೂ ಸಾರ್ವಜನಿಕರಿಗೆ ಉತ್ತಮ ವಿನೋದಾತ್ಮಕ ಸೌಲಭ್ಯಗಳನ್ನು ಒದಗಿಸುವ ಉದ್ದೇಶದಿಂದ ವಿವಿಧ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗಿದೆ ಎಂದು ಬೆಂಗಳೂರು ಕೇಂದ್ರ ನಗರ ಪಾಲಿಕೆಯ ಆಯುಕ್ತ ರಾಜೇಂದ್ರ ಚೋಳನ್ ತಿಳಿಸಿದರು. ಕೆರೆಯಲ್ಲಿನ ನೀರಿನ ಸಂಗ್ರಹದ ಸಾಮರ್ಥ್ಯವನ್ನು ಹೆಚ್ಚಿಸುವ ಉದ್ದೇಶದಿಂದ ಕೆರೆಯಲ್ಲಿ ಕಳೆದ ೧೫ ವರ್ಷಗಳಿಂದ ಶೇಖರಣೆಯಾಗಿರುವ ಹೂಳೆತ್ತುವ ಕಾರ್ಯ ಕೈಗೊಳ್ಳಲಾಗಿದೆ. ಇದಲ್ಲದೆ,

ಎರಡು ಹಂತದ ವಾಯುವಿಹಾರಿಗಳಿಗೆ ಸುಲಭ ನಡಿಗೆ ಮಾರ್ಗ ನಿರ್ಮಾಣ ಮಾಡಲಾಗುತ್ತಿದೆ ಎಂದರು.

<><><><>

ಕೇಂದ್ರ ಅಂಕಿಅಂಶ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯ, ಬೆಂಗಳೂರಿನ ಪ್ರಾದೇಶಿಕ ಕಚೇರಿಯ ರಾಷ್ಟ್ರೀಯ ಅಂಕಿಅಂಶ ಕಚೇರಿ ಮೂಲಕ ಸಂಘಟಿತ ಸೇವಾ ವಲಯದ ಉದ್ಯಮಗಳ ವಾರ್ಷಿಕ ಸಮೀಕ್ಷೆ ೨೦೨೮ ಎಂಬ ರಾಷ್ಟ್ರೀಯ ಅಂಕಿಅಂಶ ಉಪಕ್ರಮವನ್ನು ಪ್ರಾರಂಭಿಸುತ್ತಿದ್ದು, ನಾಳೆ ಬೆಂಗಳೂರಿನ ಕೋರಮಂಗಲದ ಕೇಂದ್ರೀಯ ಸದನದಲ್ಲಿರುವ ಶ್ರುತಿ ಆಡಿಟೋರಿಯಂನಲ್ಲಿ ಪ್ರಾದೇಶಿಕ ತರಬೇತಿ ಶಿಬಿರ ಆಯೋಜಿಸಲಾಗಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>